# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 902
2. ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಅಡಗೂರ್ ಹೆಚ್ ವಿಶ್ವನಾಥ್ (ನಾಮ ನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ : 24.02.2022
4. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಗ್ನಿಶಾಮಕ ಇಲಾಖೆಯಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಉಪ ನಿರ್ದೇಶಕರು(ಆಡಳಿತ) ರವರು ನಿಯಮಬಾಹಿರವಾಗಿ ನೇಮಕಾತಿ ಹೊಂದಿದ್ದಾರೆಂಬ ಬಗ್ಗೆ, ಸದರಿಯವರ ವಿರುದ್ಧ ಸರ್ಕಾರಕ್ಕೆ ದೂರುಗಳು ಬಂದಿದೆಯೇ ಬಂದಿದ್ದಲ್ಲಿ ಸದರಿ ದೂರಿನ ಆಧಾರದ ಮೇಲೆ ಸದರಿ ಉಪ ನಿರ್ದೇಶಕ(ಆಡಳಿತ) ರವರ ವಿರುದ್ಧ ಸರ್ಕಾರ ಕೂಡಲೇ ಕಾನೂನು ರೀತಿಯ ಕ್ರಮ ಕೈಗೊಳ್ಳುವುದೆ. ಈಗಾಗಲೇ ಕ್ರಮಕೈಗೊಂಡಿದ್ದಲ್ಲಿ ಸದರಿ ಅಧಿಕಾರಿ ವಿರುದ್ಧ ಕೈಗೊಂಡ ಕ್ರಮವೇನು: ಕ್ರಮ ಕೈಗೊಳ್ಳದಿದ್ದಲ್ಲಿ ಕಾರಣವೇನು: | ಸಂಖ್ಯೆ:ಹೆಚ್‌ಡಿ 84 ಎಸ್‌ಎಫ್‌ಬಿ 69, ದಿನಾಂಕ:19.05.1971ರ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ವೃಂದ ಮತ್ತು ನೇಮಕಾತಿ ನಿಯಮಗಳು ಹಾಗೂ ದಿನಾಂಕ:10.09.1992 ರ ನೇಮಕಾತಿ ಅಧಿಸೂಚನೆಗಳ ಆಧಾರದ ಮೇಲೆ ಉಪ ಅಧಿಕಾರಿ ಹುದ್ದೆಗೆ ನೇಮಕಾತಿ ಹೊಂದಿರುತ್ತಾರೆ. ದೂರು ಅರ್ಜಿ ಸ್ವೀಕರಿಸಿದ್ದು, ಈ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲಾಗುವುದು. |
| ಆ) | ಅಗ್ನಿಶಾಮಕ ಇಲಾಖೆಯಲ್ಲಿ ಮಂಜೂರಾದ ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿಗಳ ಸಂಖ್ಯೆ ಎಷ್ಟು: ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿಗಳ ಸಂಖ್ಯೆ ಎಷ್ಟು ಪ್ರಸ್ತುತ ಖಾಲಿ ಇರುವ ಹುದ್ದೆಗಳು ಯಾವ ದಿನಾಂಕದಿಂದ ಖಾಲಿ ಇವೆ. ಸದರಿ ಹುದ್ದೆಗಳನ್ನು ಮುಂಬಡ್ತಿ ಮೂಲಕ ಅಥವಾ ನೇರ ನೇಮಕಾತಿ ಮೂಲಕ ನಿಯಮಾನುಸಾರ ಭರ್ತಿ ಮಾಡಲಾಗುವುದೆ: | ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯಲ್ಲಿ 16 ಹುದ್ದೆಗಳು ಮಂಜೂರಾಗಿರುತ್ತವೆ. ಪ್ರಸ್ತುತ 07 ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿಗಳು ಕಾರ್ಯ ನಿರ್ವಹಿಸುತ್ತಿರುತ್ತಾರೆ. ಪ್ರಸ್ತುತ 09 ಹುದ್ದೆಗಳು ಖಾಲಿಯಿರುತ್ತವೆ. ಸದರಿ ಹುದ್ದೆಗಳು ಪದೋನ್ನತಿಯಿಂದ 02 ವರ್ಷದಿಂದ ಖಾಲಿ ಇರುತ್ತವೆ. ಸದರಿ ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಬೇಕಾಗಿರುತ್ತದೆ. 2021 ರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಣೆ ಮಾಡುವ ಕುರಿತು ಪ್ರಸ್ತಾವನೆಯು ಅಂತಿಮ ಹಂತದಲ್ಲಿದ್ದು, ಪರಿಶೀಲನೆಯಲ್ಲಿರುತ್ತದೆ.<br><br>ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗವು ದಿನಾಂಕ:27.08.2021 ರಂದು ನಡೆದ ವಿಚಾರಣೆಯ ನಡವಳಿಯಲ್ಲಿ 2021ರ ವೃಂದ ಮತ್ತು ನೇಮಕಾತಿ ನಿಯಮಗಳು ಸರ್ಕಾರದಿಂದ ತಿದ್ದುಪಡಿಯಾಗಿ ಅನುಮೋದನೆಯಾಗುವವರೆಗೆ ಯಾವುದೇ ಮುಂಬಡ್ತಿಯನ್ನು ಕೈಗೆತ್ತಿಗೊಳ್ಳಬಾರದೆಂದು ಸೂಚಿಸಲಾಗಿರುತ್ತದೆ.<br><br>ಮಾನ್ಯ ಕರ್ನಾಟಕದ ಉಚ್ಚ ನ್ಯಾಯಾಲಯವು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಆದೇಶಕ್ಕೆ ತಡೆಯಾಜ್ಞೆಯನ್ನು ದಿನಾಂಕ:12.01.2022 ರಂದು ನೀಡಿದ್ದು, ಸದರಿ ತಡೆಯಾಜ್ಞೆಯನ್ವಯ ಜಿಲ್ಲಾ ಅಗ್ನಿಶಾಮಕ ಅಧಿಕಾರಿಗಳಿಗೆ ಪದೋನ್ನತಿ ಸಂಬಂಧ ಸೂಕ್ತ ಮಾರ್ಗದರ್ಶನ ನೀಡುವ ಕುರಿತು ಪ್ರಸ್ತಾವನೆಯು ಪರಿಶೀಲನೆಯಲ್ಲಿದ್ದು, ಈ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು. |
| ಇ) | ಸದರಿ ಹುದ್ದೆಗಳು ಸುಮಾರು ಎರಡು ವರ್ಷಗಳಿಂದ ಖಾಲಿ ಇದ್ದರೂ ಸಹ ಹಾಗೂ ಅರ್ಹ ಅಧಿಕಾರಿಗಳು ಬಡ್ತಿ ಹೊಂದಲು ಅರ್ಹತೆ ಹೊಂದಿದ್ದರೂ ಸಹ ಬಡ್ತಿ ನೀಡಲು ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣವೇನು; ಅಂತಹ ಅಧಿಕಾರಿಗಳ ಹುದ್ದೆಗಳು ಇಲಾಖೆಗೆ ಅವಶ್ಯಕತೆ ಇಲ್ಲವೆ; ಅವಶ್ಯಕತೆ ಇಲ್ಲದಿದ್ದಲ್ಲಿ ಸದರಿ ಹುದ್ದೆಗಳನ್ನು ರದ್ದುಪಡಿಸಲು ಕ್ರಮ ಕೈಗೊಳ್ಳುವುದೇ? | |

**ಸಂಖ್ಯೆ: ಹೆಚ್‌ಡಿ 41 ಎಸ್‌ಎಫ್‌ಬಿ 2022**

(ಆರಗ ಜ್ಞಾನೇಂದ್ರ)
ಗೃಹ ಸಚಿವರು